ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ– 04, ಭೂತರಾಮನಹಟ್ಟಿ, ಬೆಳಗಾವಿ – 591156

# RANI CHANNAMMA UNIVERSITY

Vidyasangama, National Highway – 04, Bhootaramanahatti Belagavi – 591156
E-mail: rcuregistrar@gmail.com
rcubacademic2010@gmail.com
Phone: 0831-2565257/34
Website: www.rcub.ac.in

ವಿದ್ಯಾಮಂಡಳ (ಸ್ನಾತಕೋತ್ತರ ವಿಭಾಗ)

ಸಂ.:ರಾಚವಿ/ಬೆಳಗಾವಿ/ಕುಸಕಾ/ವಿ.ಮ.ವಿ.ಸ್ನಾತಕೋತ್ತರ/2021-22/463 ದಿನಾಂಕ: 26 APR 2021

## ಸುತ್ತೋಲೆ

ವಿಷಯ: 2020–21ನೇ ಶೈಕ್ಷಣಿಕ ಸಾಲಿನ 2 ಮತ್ತು 4ನೇ ಸೆಮಿಸ್ಟರ್‌ನ ತರಗತಿಗಳನ್ನು ಆನಲೈನ್ ಮುಖಾಂತರ ನಡೆಸುವ ಕುರಿತು.

ಉಲ್ಲೇಖ; ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 26.04.2021.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖದನ್ವಯ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ನಿರ್ದೇಶಕರು/ಸಂಯೋಜಕರು, ಘಟಕ ಮಹಾವಿದ್ಯಾಲಯ ಹಾಗೂ ಸಂಯೋಜಿತ ಮಹಾವಿದ್ಯಾಲಯದ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, 2020–21ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸ್‌ಗಳ 1, ಮತ್ತು 3ನೇ ಸೆಮಿಸ್ಟರ್‌ನ ಪರೀಕ್ಷೆಗಳು ಅನಿರ್ದಿಷ್ಟಾವಧಿಯವರೆಗೆ ಮುಂದೂಡಲಾಗಿರುವುದರಿಂದ ಸರ್ಕಾರದ ನಿರ್ದೇಶನದ ಮೇರೆಗೆ ದಿನಾಂಕ:28–04–2021 ರಿಂದ ಪ್ರಾಧ್ಯಾಪಕರು ವಿಶ್ವವಿದ್ಯಾಲಯದಿಂದ ಮತ್ತು ಉಪನ್ಯಾಸಕರು ತಮ್ಮ ಮಹಾವಿದ್ಯಾಲಯದಿಂದಲೇ ಸ್ನಾತಕೋತ್ತರ ಕೋರ್ಸುಗಳ 2, ಮತ್ತು 4ನೇ ಸೆಮಿಸ್ಟರ್‌ಗಳ ತರಗತಿಗಳನ್ನು ಹಾಗೂ ಹಾಜರಾತಿಯನ್ನು ಕಡ್ಡಾಯಗೊಳಿಸಿ ಆನ್‌ಲೈನ್ ಮುಖಾಂತರ ನಡೆಸುವಂತೆ ತಿಳಿಸಲಾಗಿದೆ ಮತ್ತು ಎಲ್ಲಾ ಅಧ್ಯಾಪಕರುಗಳು ಆನ್‌ಲೈನ್ ಮುಖಾಂತರ ನಡೆಸಿದ ಪಾಠಗಳ ವರದಿಯನ್ನು ಪ್ರತಿ ತಿಂಗಳು ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಪ್ರಾಚಾರ್ಯರ ಮೂಲಕ ಕುಲಸಚಿವರಿಗೆ ಕಳುಹಿಸಿಕೊಡುವುದು.

ಆನ್‌ಲೈನ್ ತರಗತಿಗಳ ಕುರಿತು ವಿದ್ಯಾರ್ಥಿಗಳಿಂದ ಯಾವುದೇ ರೀತಿಯ ಸಮಸ್ಯೆಗಳು ಬಂದಲ್ಲಿ ಆಯಾ ವಿಭಾಗದ ಮುಖ್ಯಸ್ಥರು ಮತ್ತು ಆಯಾ ಮಹಾವಿದ್ಯಾಲಯದ ಪ್ರಾಚಾರ್ಯರುಗಳೇ ಬಗೆಹರಿಸಿ ಆನ್‌ಲೈನ್ ತರಗತಿಗಳು ಪರಿಣಾಮಕಾರಿಯಾಗಿ ನಡೆಯುವಂತೆ ಕ್ರಮ ಕೈಗೊಳ್ಳಲು ಈ ಮೂಲಕ ಎಲ್ಲ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರಿಗೆ ಮತ್ತು ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ತಿಳಿಸಲಾಗಿದೆ.

ಕುಲಸಚಿವರು
ಕುಲಸಚಿವರು
ರಾಣಿ ಚನ್ನಮ್ಮಾ ವಿಶ್ವವಿದ್ಯಾಲಯ
ಬೆಳಗಾವಿ

**ಇವರಿಗೆ,**

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರುಗಳಿಗೆ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ನಿರ್ದೇಶಕರು, ಸಂಯೋಜಕರುಗಳಿಗೆ, ಸ್ನಾತಕೋತ್ತರ ಕೇಂದ್ರಗಳು ವಿಜಯಪುರ ಮತ್ತು ಬಾಗಲಕೋಟೆ, ಜಮಖಂಡಿ.
3. ಪ್ರಾಚಾರ್ಯರು, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ, ಬೆಳಗಾವಿ.
4. ಪ್ರಾಚಾರ್ಯರು, ಎಲ್ಲ ಸಂಯೋಜಿತ ಮಹಾವಿದ್ಯಾಲಯಗಳು, ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ, ಜಮಖಂಡಿ.

ಪ್ರತಿ ಮಾಹಿತಿಗಾಗಿ;

1. ಕುಲಸಚಿವರು (ಮೌಲ್ಯಮಾಪನ) ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ಹಣಕಾಸು ಅಧಿಕಾರಿಗಳು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
3. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
4. ರಕ್ಷಾ ಪ್ರತಿ.